ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ ರೋಣ

**ಸಿ.ಸಿ. ನಂ.971/2023**

**ಫಿರ್ಯಾದಿದಾರರು** - ಕರ್ನಾಟಕ ಸರ್ಕಾರ (ರೋಣ ಅಬಕಾರಿ ಇಲಾಖೆ)

**ವಿರುದ್ಧ**

**ಆರೋಪಿ** - ಭೀಮಪ್ಪ ತಂದೆ ಯಲ್ಲಪ್ಪ ಹಾದಿಮನಿ,
ವಯಾಃ 38 ವರ್ಷ,
ಸಾಃ ಇಟಗಿ, ತಾಃ ಗಜೇಂದ್ರಗಡ, ಜಿಃ ಗದಗ.

**ದೋಷಾರೋಪಣೆ**

**ಶ್ರೀ. ಆದಿತ್ಯ ಆರ್. ಕಲಾಲ್,** ಬಿ.ಎ.ಎಲ್., ಎಲ್ ಎಲ್ ಬಿ., ಎಲ್ ಎಲ್. ಎಂ., ಪ್ರಧಾನ ದಿವಾಣಿ ನ್ಯಾಯಧೀಶರು ಮತ್ತು ಜೆ.ಎಂ.ಎಫ್.ಸಿ., ರೋಣ ಆದ ನಾನು ನಿಮ್ಮ ವಿರುದ್ಧ ಮಾಡುತ್ತಿರುವ ದೋಷಾರೋಷಣೆ ಏನೆಂದರೆಃ-

ದಿನಾಂಕ 17/04/2023 ರಂದು ಸಾಯಂಕಾಲ 07-00 ಗಂಟೆ ಸುಮಾರಿಗೆ ರೋಣ ವಲಯ ಸರಹದ್ದಿಗೆ ಸೇರಿದ ಗಜೇಂದ್ರಗಡ ತಾಲೂಕಿನ ಇಟಗಿ ಗ್ರಾಮದಲ್ಲಿ ಆರೋಪಿಯಾದ ನೀವು ಯಾವುದೇ ಪಾಸ ವ ಪರ್ಮಿಟ ಇಲ್ಲದೆ ತಮ್ಮ ಸ್ವಂತ ಲಾಭಕ್ಕೋಸ್ಕರ ಅನಧಿಕೃತವಾಗಿ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ವಿಸ್ಕಿಯ 288 ಟೆಟ್ರಾ ಪ್ಯಾಕೇಟಗಳನ್ನು ನಿಮ್ಮ ತಾಬಾದಲ್ಲಿ ಇಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32(1)** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

2. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮೇಲೆ ಹೇಳಿದ ಮಧ್ಯವನ್ನು ಸಾರ್ವಜನಿಕರಿಗೆ ಮಾರಾಟ ಮಾಡುವ ಉದ್ದೇಶದಿಂದ ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ **38(ಎ)** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

3. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ನಿಮ್ಮ ವಾಸದ ಮನೆಯಲ್ಲಿ ಮೇಲೆ ಹೇಳಿದ ಮಧ್ಯವನ್ನು ಸಾರ್ವಜನಿಕರಿಗೆ ಮಾರಾಟ ಮಾಡುವ ಉದ್ದೇಶದಿಂದ ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ **43** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

ಮೇಲ್ಕಂಡ ಆರೋಪಗಳನ್ನು ಆರೋಪಿಯಾದ ನೀವು ಈ ನ್ಯಾಯಲಯದ ವಿಚಾರಣಾ ವ್ಯಾಪ್ತಿಯಲ್ಲಿ ಎಸಗಿರುವುದರಿಂದ ಸದರಿ ಆರೋಪಗಳಿಗೆ ನನ್ನ ಮುಂದೆ ವಿಚಾರಣೆಗೆ ಒಳಪಡಬೇಕೆಂದು ಈ ಮೂಲಕ ನಿರ್ದೇಶಿಸುತ್ತಿದ್ದೇನೆ.

ದಿನಾಂಕಃ-

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ರೋಣ.

<u>ಆರೋಪಿಯ ಹೇಳಿಕೆ</u>

1. ಈ ಮೇಲೆ ಓದಿ ಹೇಳಿದ ದೋಷರೋಪಣೆಯ ನಿಮಗೆ ಅರ್ಥವಾಯಿತೆ?

ಉತ್ತರಃ

2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರೋ? ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ

(ಮೇಲೆ ಹೇಳಿದ ದೋಷರೋಪಣೆಯನ್ನು ಆರೋಪಿಗೆ ಓದಿ ಹೇಳಿ ತಿಳಿಸಿ, ಸದರಿ ಆರೋಪಿಯು ನೀಡಿದ ಉತ್ತರಗಳನ್ನು ತೆರೆದ ನ್ಯಾಯಲಯದಲ್ಲಿ ದಿನಾಂಕ ರಂದು ದಾಖಲಿಸಿದೆ.)

ದಿನಾಂಕಃ-

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ರೋಣ.

<u>ಆರೋಪಿಯ ಸಹಿಃ</u>